# National
# Kannada
# 23.04.2025 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಪಹಲ್ಗಾಮ್ ಭಯೋತ್ಪಾದಕರ ದಾಳಿ ಪ್ರಕರಣ : ಪ್ರಧಾನಿ ನೇತೃತ್ವದಲ್ಲಿ ಭದ್ರತೆ ಕುರಿತು ಸಂಪುಟ ಸಮಿತಿ ವಿಶೇಷ ಸಭೆ
2. ಭಯೋತ್ಪಾದನೆಯ ವಿರುದ್ಧ ಭಾರತದ ಶೂನ್ಯ ಸಹಿಷ್ಣುತಾ ನೀತಿ - ರಕ್ಷಣಾ ಸಚಿವ ರಾಜನಾಥ್ ಸಿಂಗ್
3. ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಭಯೋತ್ಪಾದಕರ ದಾಳಿ - ವಿಶ್ವದಾದ್ಯಂತ ವ್ಯಾಪಕ ಖಂಡನೆ
4. ಪಹಲ್ಗಾಮ್‌ನಲ್ಲಿ ಸಾವನಪ್ಪಿದ ಇಬ್ಬರ ಕುಟುಂಬಕ್ಕೆ ತಲಾ ೧೦ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ ಕರ್ನಾಟಕ ಸರ್ಕಾರ
5. ನವದೆಹಲಿಯಲ್ಲಿಂದು ೩೮ನೇ ಕೇಂದ್ರ ಪುರಾತತ್ವ ಸಲಹಾ ಮಂಡಳಿ ಸಭೆ

<><><><>

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಸಂಬಂಧಿಸಿದಂತೆ ನವದೆಹಲಿಯಲ್ಲಿರುವ ಪ್ರಧಾನಿಯವರ ನಿವಾಸದಲ್ಲಿ ಭದ್ರತೆ ಕುರಿತ ಸಂಪುಟ ಸಮಿತಿಯ ಸಭೆ ನಡೆಯಿತು. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತಿತರ ಹಿರಿಯ ಅಧಿಕಾರಿಗಳು ಭಾಗವಹಿಸಿದರು. ಸಭೆಯಲ್ಲಿ, ಭದ್ರತೆ ಕುರಿತ ಸಂಪುಟ ಸಮಿತಿ ಪರಿಸ್ಥಿತಿಯನ್ನು ಪರಿಶೀಲಿಸಿದೆ.

<><><><>

ಭಯೋತ್ಪಾದನೆಯ ವಿರುದ್ಧ ಭಾರತದ ಶೂನ್ಯ ಸಹಿಷ್ಣುತಾ ನೀತಿಯನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಪುನರುಚ್ಚರಿಸಿದರು. ನವದೆಹಲಿಯಲ್ಲಿಂದು ಭಾರತೀಯ ವಾಯುಪಡೆ ಆಯೋಜಿಸಿದ್ದ ಭಾರತೀಯ ವಾಯುಪಡೆಯ ಮಾರ್ಷಲ್ ಅರ್ಜನ್ ಸಿಂಗ್ ಅವರ ಸ್ಮರಣಾರ್ಥ ಉಪನ್ಯಾಸವನ್ನುದ್ದೇಶಿಸಿ ಮಾತನಾಡಿದ ಸಚಿವರು, ಪಹಲ್ಗಾಮ್ ದಾಳಿಗೆ ಕಾರಣರಾದವರಿಗೆ ಸೂಕ್ತ ಉತ್ತರ ನೀಡಲು ಸರ್ಕಾರ ನಿರ್ದಾಕ್ಷಣ್ಯ ಕ್ರಮಕೈಗೊಳ್ಳಲಿದೆ ಎಂದು ಹೇಳಿದರು.

ಧ್ವನಿ : ರಾಜನಾಥ್ ಸಿಂಗ್ (೨೨ ಸೆಕೆಂಡ್‌ಗಳು)

<><><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಕಾಶ್ಮೀರ ಕಣಿವೆಯಲ್ಲಿನ ಪ್ರಸ್ತುತ ಭದ್ರತಾ ಪರಿಸ್ಥಿತಿಯನ್ನು ಮೂರೂ ಸೇನೆಗಳ ಉನ್ನತ ಅಧಿಕಾರಿಗಳೊಂದಿಗೆ ಪರಿಶೀಲಿಸಿದರು. ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ನೌಕಾಪಡೆ ಮುಖ್ಯಸ್ಥ ಅಡ್ಮಿರಲ್ ದಿನೇಶ್ ತ್ರಿಪಾಠಿ, ವಾಯುಪಡೆ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್, ಎ.ಪಿ ಸಿಂಗ್ ಮತ್ತು ಇತರ ಹಿರಿಯ ಅಧಿಕಾರಿಗಳು ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಪ್ರಸ್ತುತ ಭದ್ರತಾ ಪರಿಸ್ಥಿತಿಯ ಬಗ್ಗೆ ರಾಜನಾಥ್ ಸಿಂಗ್ ಅವರಿಗೆ ವಿವರಿಸಿದರು ಎಂದು ರಕ್ಷಣಾ ಮೂಲಗಳು ತಿಳಿಸಿವೆ. ಪೀಡಿತ ಪ್ರದೇಶಗಳಿಗೆ ಉನ್ನತ ಅಧಿಕಾರಿಗಳು

ಧಾವಿಸಿದ್ದು, ಸ್ಥಳೀಯ ಪಡೆಗಳು ಜಾಗರೂಕರಾಗಿರಲು ಮತ್ತು ಭಯೋತ್ಪಾದಕ ನಿಗ್ರಹ ಕಾರ್ಯಾಚರಣೆಯನ್ನು ಇನ್ನಷ್ಟು ತೀವ್ರಗೊಳಿಸಲು ಆದೇಶಿಸಲಾಗಿದೆ. ಕಣಿವೆಯಲ್ಲಿ ಶೋಧ ಮತ್ತು ಕಾರ್ಯಾಚರಣೆಗಳನ್ನು ನಡೆಸಲು ದಾಳಿ ಸ್ಥಳದ ಸಮೀಪವಿರುವ ಪ್ರದೇಶಗಳಲ್ಲಿ ಹೆಚ್ಚಿನ ಸೈನಿಕರನ್ನು ನಿಯೋಜಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

<><><>

ಗೃಹ ಸಚಿವ ಅಮಿತ್ ಶಾ ಪಹಲ್ಗಾಮ್ ತಲುಪಿದ ನಂತರ ಜಮ್ಮು ಮತ್ತು ಕಾಶ್ಮೀರದ ಬೈಸರನ್ ಅರಣ್ಯ ಪ್ರದೇಶದಲ್ಲಿ ದಾಳಿ ನಡೆದ ಸ್ಥಳದ ಪರಿಸ್ಥಿತಿಯನ್ನು ಖುದ್ದಾಗಿ ಅವಲೋಕಿಸಿದರು. ಅನಂತ್‌ನಾಗ್ ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಗಾಯಗೊಂಡ ಜನರ ಆರೋಗ್ಯ ಸ್ಥಿತಿಯ ಬಗ್ಗೆ ಅವರು ವಿಚಾರಿಸಿದರು. ನಿನ್ನೆಯ ಪಹಲ್ಗಾಮ್ ದಾಳಿಯಲ್ಲಿ ಅಧಿಕೃತ ಮೂಲಗಳ ಪ್ರಕಾರ ಇಬ್ಬರು ಸ್ಥಳೀಯರು ಸೇರಿದಂತೆ ೨೬ ಪ್ರವಾಸಿಗರು ಮೃತಪಟ್ಟಿರುವುದಾಗಿ ವರದಿಯಾಗಿದೆ. ಪೊಲೀಸರು ಮತ್ತು ಗುಪ್ತಚರ ಸಂಸ್ಥೆಗಳು ಮೂವರು ದಾಳಿಕೋರರ ರೇಖಾಚಿತ್ರಗಳನ್ನು ಬಿಡುಗಡೆ ಮಾಡಿವೆ. ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಹತ್ಯೆಗಳ ವಿರುದ್ಧ ಕಾಶ್ಮೀರ ಕಣಿವೆ ದಿನವಿಡೀ ಸಂಪೂರ್ಣ ಬಂದ್ ಆಚರಿಸುತ್ತಿದೆ. ಹೆಚ್ಚಿನ ಅಂಗಡಿಗಳು, ಮುಖ್ಯ ಮಾರುಕಟ್ಟೆಗಳು ಮತ್ತು ಸ್ಥಳೀಯ ಕೈಗಾರಿಕಾ ಮತ್ತು ಉತ್ಪಾದನಾ ಘಟಕಗಳು ಮುಚ್ಚಲ್ಪಟ್ಟಿವೆ. ಸಾರ್ವಜನಿಕ ಸಾರಿಗೆ ಸಂಪೂರ್ಣ ಸ್ಥಗಿತಗೊಂಡಿದೆ. ಜಮ್ಮು ಮತ್ತು ಕಾಶ್ಮೀರ ಸರ್ಕಾರ ಪಹಲ್ಗಾಮ್ ಭಯೋತ್ಪಾದನಾ ದಾಳಿಯಲ್ಲಿ ಸಾವನ್ನಪ್ಪಿದವರ ಕುಟುಂಬಕ್ಕೆ ೧೦ ಲಕ್ಷ ರೂಪಾಯಿ ಪರಿಹಾರ ಘೋಷಿಸಿದೆ. ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಗಂಭೀರ ಗಾಯಗೊಂಡವರಿಗೆ ತಲಾ ೨ ಲಕ್ಷ ಹಾಗೂ ಸಾಮಾನ್ಯ ಗಾಯಾಳುಗಳಿಗೆ ೧ ಲಕ್ಷ ರೂಪಾಯಿ ಪರಿಹಾರ ಘೊಷಿಸಿದ್ದಾರೆ.

<><><>

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಕಾಶ್ಮೀರ ಕಣಿವೆಯಲ್ಲಿ ಪ್ರವಾಸೋದ್ಯಮದ ಮೇಲಿನ ಹಾನಿಯನ್ನು ಕಡಿಮೆ ಮಾಡಲು ಕೇಂದ್ರವು ತನ್ನ ಕೈಲಾದಷ್ಟು ಪ್ರಯತ್ನಿಸುತ್ತದೆ ಎಂದು ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಹೇಳಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಮುಖ್ಯ ಕಾರ್ಯದರ್ಶಿ ಮತ್ತು ಪ್ರವಾಸೋದ್ಯಮ ಇಲಾಖೆಯೊಂದಿಗೆ ಸಂಪರ್ಕದಲ್ಲಿದ್ದು, ಭಾರತ ಭಯೋತ್ಪಾದನೆಯ ಬಗ್ಗೆ ಶೂನ್ಯ ಸಹಿಷ್ಣುತೆಯ ವಿಧಾನವನ್ನು ಹೊಂದಿದೆ ಎಂದು ಹೇಳಿದ್ದಾರೆ.

ಧ್ವನಿ - ಗಜೇಂದ್ರ ಸಿಂಗ್ ಶೇಖಾವತ್ (೩೦ ಸೆಕೆಂಡ್‌ಗಳು)

<><><>

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕರ ದಾಳಿಗೆ ವಿಶ್ವದಾದ್ಯಂತ ವ್ಯಾಪಕ ಖಂಡನೆ ವ್ಯಕ್ತವಾಗಿದೆ. ಈ ಸಂಬಂಧ ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್, ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್, ಜರ್ಮನಿ ಚಾನ್ಸ್‌ಲರ್ ಓಲಾಫ್ ಶಾಲ್ಸ್, ಡೆನ್ಮಾರ್ಕ್ ಪ್ರಧಾನಿ ಮೆಟ್ ಫ್ರೆಡ್ರಿಕ್‌ಸನ್, ಐರೋಪ್ಯ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್‌ಡರ್‌ಲೆಯಾನ್, ಮಾರಿಷಸ್ ಪ್ರಧಾನಿ ಡಾ. ನವೀನ್ ರಾಮಗೂಲಮ್, ನೇಪಾಳ ಪ್ರಧಾನಿ ಕೆ.ಪಿ.ಶರ್ಮ ಓಲಿ, ಬಾಂಗ್ಲಾದೇಶ ಮಧ್ಯಂತರ ಸರ್ಕಾರದ ಪ್ರಧಾನ ಸಲಹೆಗಾರ ಮುಹಮ್ಮದ್ ಯೂನಸ್, ಭಾರತ ಪ್ರವಾಸದಲ್ಲಿರುವ ಅಮೆರಿಕ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ಸೇರಿದಂತೆ ಹಲವು ಜಾಗತಿಕ ನಾಯಕರು ಘಟನೆಯನ್ನು ತೀವ್ರವಾಗಿ ಖಂಡಿಸಿದ್ದಾರೆ. ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್, ಇಂದು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದೂರವಾಣಿ ಮೂಲಕ ಸಂಭಾಷಣೆ ನಡೆಸಿದ್ದು, ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ತೀವ್ರವಾಗಿ

ಖಂಡಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಸಂಚಿಕೊಂಡಿರುವ ವಿದೇಶಾಂಗ ಸಚಿವಾಲಯ, ದಾಳಿಯಲ್ಲಿ ಮೃತಪಟ್ಟವರಿಗೆ ಆಸ್ಟ್ರೇಲಿಯಾ ಪ್ರಧಾನಿ ಸಂತಾಪ ಸೂಚಿಸಿದ್ದು, ಈ ದುಃಖದ ಸಮಯದಲ್ಲಿ ಭಾರತದ ಜನರೊಂದಿಗೆ ನಿಲ್ಲುವುದಾಗಿ ಹಾಗೂ ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಭಾರತಕ್ಕೆ ಆಸ್ಟ್ರೇಲಿಯಾದ ಸಂಪೂರ್ಣ ಬೆಂಬಲವಿರುವುದಾಗಿ ತಿಳಿಸಿದ್ದಾರೆ ಎಂದು ತಿಳಿಸಿದೆ. ನೇಪಾಳ ಪ್ರಧಾನಿ ಕೆ.ಪಿ.ಶರ್ಮ ಓಲಿ ಇಂದು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದ್ದು, ಘಟನೆಯನ್ನು ತೀವ್ರವಾಗಿ ಖಂಡಿಸಿ, ಮೃತಪಟ್ಟವರಿಗೆ ಸಂತಾಪ ಸೂಚಿಸಿದ್ದಾರೆ. ಹಾಗೂ ಈ ಸಮಯದಲ್ಲಿ ಭಾರತದೊಂದಿಗೆ ನಿಲ್ಲುವುದಾಗಿ ತಿಳಿಸಿದ್ದಾರೆ. ಬಾಂಗ್ಲಾದೇಶ ಮಧ್ಯಂತರ ಸರ್ಕಾರದ ಪ್ರಧಾನ ಸಲಹೆಗಾರ ಮುಹಮ್ಮದ್ ಯೂನಸ್ ಸಾಮಾಜಿಕ ಮಾಧ್ಯಮದಲ್ಲಿ, ಪಹಲ್ಗಾಮ್ ನಲ್ಲಿ ಭಯೋತ್ಪಾದಕರು ನಡೆಸಿರುವುದು ಒಂದು ಹೀನಾಯ ಕೃತ್ಯವಾಗಿದ್ದು, ಬಾಂಗ್ಲಾದೇಶ ತೀವ್ರವಾಗಿ ಖಂಡಿಸುತ್ತದೆ ಎಂದಿದ್ದು, ಭಯೋತ್ಪಾದನೆಯ ವಿರುದ್ಧ ಬಾಂಗ್ಲಾದೇಶದ ದೃಢ ನಿಲುವನ್ನು ಅವರು ಪುನರುಚ್ಚರಿಸಿದ್ದಾರೆ. ಪಾಕಿಸ್ತಾನದ ವಿದೇಶಾಂಗ ಕಚೇರಿ ಬಿಡುಗಡೆಗೊಳಿಸಿರುವ ಹೇಳಿಕೆಯಲ್ಲಿ, ಅನಂತನಾಗ್ ಜಿಲ್ಲೆಯಲ್ಲಿ ಪ್ರವಾಸಿಗರ ಮೇಲೆ ನಡೆದ ದಾಳಿಯ ಕುರಿತು ಕಳವಳ ವ್ಯಕ್ತಪಡಿಸಿದ್ದು, ಮೃತಪಟ್ಟವರಿಗೆ ಸಂತಾಪ ಸೂಚಿಸಿ, ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದೆ.

<><><>

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟವರ ಕುಟುಂಬಸ್ಥರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಲಾ ೧೦ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ರಾಜ್ಯದ ಇಬ್ಬರು ಪ್ರವಾಸಿಗರಾದ ಶಿವಮೊಗ್ಗದ ಮಂಜುನಾಥ್ ಹಾಗೂ ಬೆಂಗಳೂರಿನ ಭರತ್ ಭೂಷಣ್ ಮೃತಪಟ್ಟವರು. ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ಕರ್ನಾಟಕ ಸರ್ಕಾರದಿಂದ ಸಕಲ ವ್ಯವಸ್ಥೆ ಮಾಡಲಾಗಿದ್ದು, ಸಚಿವ ಸಂತೋಷ್ ಲಾಡ್ ಈಗಾಗಲೇ ರಾಜ್ಯದ ಪ್ರವಾಸಿಗರ ರಕ್ಷಣೆಯಲ್ಲಿ ನಿರತರಾಗಿದ್ದಾರೆ.

<><><>

ಪಹಲ್ಗಾಮ್‌ನ ಭಯೋತ್ಪಾದನಾ ದಾಳಿ ನಡೆದ ೨೪ ಗಂಟೆಯೊಳಗೆ ಜಮ್ಮು ಮತ್ತು ಕಾಶ್ಮೀರದ ಕುಲ್ಗಾಮ್ ಜಿಲ್ಲೆಯಲ್ಲಿ ಭದ್ರತಾ ಪಡೆ ಮತ್ತು ಭಯೋತ್ಪಾದಕರ ನಡುವೆ ಗುಂಡಿನ ಚಕಮಕಿ ಇಂದು ಸಂಜೆ ನಡೆದಿರುವ ಕುರಿತಂತೆ ವರದಿಯಾಗಿದೆ. ಬಾರಾಮುಲ್ಲಾ ಜಿಲೆಯ ಉರಿ ಸೆಕ್ಟರ್‌ನ ನಿಯಂತಣ ರೇಖೆಯಲ್ಲಿ ಒಳನುಸುಳುವಿಕೆ ಪ್ರಯತ್ನವನ್ನು ಭಾರತೀಯ ಸೇನೆ ವಿಫಲಗೊಳಿಸಿದ ಸಂದರ್ಭದಲ್ಲಿ ಇಬ್ಬರು ಭಯೋತ್ಪಾದಕರು ಮೃತಪಟ್ಟಿದ್ದಾರೆ. ಕುಲ್ಗಾಮ್ ನ ತಂಗ್‌ಮಾರ್ಗ್ ಪ್ರದೇಶದಲ್ಲಿ ಭಯೋತ್ಪಾದಕರು ಇರುವ ಬಗ್ಗೆ ಗುಪ್ತಚರ ಮಾಹಿತಿ ಪಡೆದ ಭದ್ರತಾಪಡೆಗಳು, ಸುತ್ತುವರೆದು ಅಡಗಿ ಕೊಂಡಿದ್ದ ಭಯೋತ್ಪಾದಕರ ಮೇಲೆ ಗುಂಡು ಹಾರಿಸಿದ್ದಾರೆ. ಭಯೋತ್ಪಾದಕರು ತಪ್ಪಿಸಿಕೊಳ್ಳದಂತೆ ಹೆಚ್ಚಿನ ಸೇನೆಯನ್ನು ರವಾನಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

<><><>

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಿನ್ನೆ ನಡೆದ ಭಯೋತ್ಪಾದಕ ದಾಳಿಯನ್ನು ಖಂಡಿಸಿ, ಲಡಾಖ್‌ನ ಕಾರ್ಗಿಲ್‌ನಲ್ಲಿ ಇಂದು ಅರ್ಧ ದಿನ ಸಂಪೂರ್ಣ ಬಂದ್ ಆಚರಿಸಲಾಯಿತು. ಕಾರ್ಗಿಲ್ ಪಟ್ಟಣ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿನ ಎಲ್ಲಾ ವಾಣಿಜ್ಯ ಕಟ್ಟಡಗಳು ಮುಚ್ಚಲ್ಪಟ್ಟಿದ್ದವು. ಘಟನೆಯ ಬಗ್ಗೆ ಸಾರ್ವಜನಿಕರು ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಹಾಗೂ ಈ ಅನಾಗರಿಕ ಕೃತ್ಯಕ್ಕೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

ಲಡಾಖ್‌ನ ಹಲವಾರು ಪ್ರಮುಖ ನಾಯಕರು ಮತ್ತು ಸಂಘಟನೆಗಳು ಸಹ ದಾಳಿಯನ್ನು ಖಂಡಿಸಿದವು. ಭಯೋತ್ಪಾದಕರ ಈ ದಾಳಿಯನ್ನು ಹೇಡಿತನದ ಕೃತ್ಯ ಎಂದು ಕರೆದಿದ್ದಾರೆ. ಭವಿಷ್ಯದಲ್ಲಿ ಈ ರೀತಿಯ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮ ವಹಿಸುವಂತೆ ಸರ್ಕಾರವನ್ನು ಒತ್ತಾಯಿಸಿದ್ದಾರೆ.

<><><><>

ನವದೆಹಲಿಯ ಭಾರತ್ ಮಂಟಪದಲ್ಲಿಂದು ೩೮ನೇ ಕೇಂದ್ರ ಪುರಾತತ್ವ ಸಲಹಾ ಮಂಡಳಿ ಸಭೆ, ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅಧ್ಯಕ್ಷತೆಯಲ್ಲಿ ನಡೆಯಿತು. ಉದ್ಘಾಟನಾ ಕಾರ್ಯಕ್ರಮದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಗಜೇಂದ್ರ ಸಿಂಗ್ ಶೆಖಾವತ್, ದೇಶದ ಪರಂಪರೆ ಮತ್ತು ಐತಿಹಾಸಿಕ ಸ್ಮಾರಕಗಳನ್ನು ಸಂರಕ್ಷಿಸುವಲ್ಲಿ ಭಾರತೀಯ ಪುರಾತತ್ವ ಸಮೀಕ್ಷೆ ನಿರಂತರವಾಗಿ ಶ್ರಮಿಸುತ್ತಿದೆ. ಈ ಸಭೆ ಹಿಂದಿನ ಸಾಧನೆಗಳನ್ನು ಪುನರ್ ಮನನ ಮಾಡಿಕೊಳ್ಳಲು ಮತ್ತು ಭವಿಷ್ಯದ ಯೋಜನೆಗಳನ್ನು ರೂಪಿಸಲು ವಿವಿಧ ಪಾಲುದಾರರಿಗೆ ನಿರ್ಣಾಯಕ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ತಿಳಿಸಿದರು. ಭಾರತದ ಬೆಳೆಯುತ್ತಿರುವ ಜಾಗತಿಕ ಸ್ಥಾನಮಾನದ ಕುರಿತು ಮಾತನಾಡಿದ ಸಚಿವರು, ಪ್ರತಿಯೊಬ್ಬ ಭಾರತೀಯನು ಹೆಮ್ಮೆಯ ಭಾವನೆ ಹೊಂದಿದ್ದಾನೆ. ಜಾಗತಿಕವಾಗಿ ಭಾರತದ ಕುರಿತಂತೆ ಇದ್ದ ಅಭಿಪ್ರಾಯಗಳು ಬದಲಾಗುತ್ತಿವೆ. ಈ ಸಭೆಯ ಫಲಿತಾಂಶಗಳು ದೇಶದ ಪರಂಪರೆಯ ಸಂರಕ್ಷಣೆ ಮತ್ತು ಪುರಾತತ್ತ್ವ ಉಪಕ್ರಮಗಳಿಗೆ ಮುಂದಿನ ಹಾದಿಯನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿವೆ ಎಂದು ಹೇಳಿದರು.

<><><><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ಇದೇ ತಿಂಗಳ ೨೫, ೨೬ರಂದು ತಮಿಳುನಾಡು ಪ್ರವಾಸ ಕೈಗೊಳ್ಳಲಿದ್ದಾರೆ. ಅವರು ನೀಲಗಿರಿ ಜಿಲ್ಲೆಯ ಊಟಿ ರಾಜಭವನದಲ್ಲಿ ನಡೆಯುವ ಉಪಕುಲಪತಿಗಳ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಕೇಂದ್ರ, ರಾಜ್ಯ, ಖಾಸಗಿ ವಿಶ್ವವಿದ್ಯಾನಿಲಯಗಳ ಉಪಕುಲಪತಿಗಳು ಈ ಸಮ್ಮೇಳನದಲ್ಲಿ ಪಾಲ್ಗೊಳಲಿದ್ದು, ತಮಿಳುನಾಡಿನ ರಾಜ್ಯಪಾಲ ಆರ್.ಎನ್. ರವಿಯವರು ಈ ಸಮ್ಮೇಳನವನ್ನು ಆಯೋಜಿಸಿದ್ದಾರೆ. ಉಪರಾಷ್ಟ್ರಪತಿ ಪ್ರವಾಸದ ಹಿನ್ನೆಲೆಯಲ್ಲಿ ಭದ್ರತಾ ಕ್ರಮಗಳನ್ನು ಬಿಗಿಗೊಳಿಸಲಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>